**ಕರ್ನಾಟಕ ಸರ್ಕಾರ**

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-560001**

**ಸಂಖ್ಯೆ: ಇ-ಆಡಳಿತ/ ಸಿ.ಸೇ.ಮಾ.ನೋ.ಅ:01/2018-19** **ದಿನಾಂಕ:28-12-2018**

ವಿಷಯ:-ಸಿಬ್ಬಂದಿ ಸೇವಾ ಮಾಹಿತಿ ಮತ್ತು SPARROW ತಂತ್ರಾಂಶಗಳಿಗೆ ಸಂಬಂಧಿಸಿದಂತೆ ಜಿಲ್ಲಾ ನೋಡಲ್ ಅಧಿಕಾರಿಗಳನ್ನು ನೇಮಿಸುವ ಬಗ್ಗೆ.

----------

ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರು, ಬೋಧಕೇತರ ಸಿಬ್ಬಂದಿ ಮತ್ತು ಎಲ್ಲಾ ಹಂತದ ಅಧಿಕಾರಿಗಳ ಸೇವಾವಿವರವನ್ನು ತಂತ್ರಾಂಶಗಳ ಮೂಲಕ ಸಂಗ್ರಹಿಸಲಾಗುತ್ತಿದೆ. ಸದರಿ ವಿವರವನ್ನು ಇಲಾಖೆಯು ವಿವಿಧ ಉದ್ದೇಶಗಳಿಗೆ ಬಳಕೆ ಮಾಡುವ ಸಂದರ್ಭದಲ್ಲಿ ಕಛೇರಿಯ ಮುಖ್ಯಸ್ಥರು ಸಿಬ್ಬಂದಿ ಸೇವಾ ವಿವರವನ್ನು ತಂತ್ರಾಂಶದಲ್ಲಿ ಅಳವಡಿಸುವಾಗ ಇಲಾಖಾ ಸೂಚನೆಗಳು ಮತ್ತು ಸೇವಾವಹಿಯನ್ನು ಪರಿಶೀಲಿಸದೆ ಸಾಕಷ್ಟು ತಪ್ಪು ಮಾಹಿತಿಗಳನ್ನು ನಮೂದಿಸಿರುವುದು ಗಮನಿಸಲಾಗಿದೆ. ಇನ್ನು ಮುಂದೆ ಇಲಾಖೆಯಲ್ಲಿ ಸಿಬ್ಬಂದಿ/ಅಧಿಕಾರಿಗಳ ಸೇವಾ ಸೌಲಭ್ಯಗಳನ್ನು ಒದಗಿಸಲು ಆನ್ ಲೈನ್ ಸೇವೆಗಳನ್ನು ನೀಡಲು ಉದ್ದೇಶಿಸಿರುವುದರಿಂದ ಮಾಹಿತಿಯಲ್ಲಿ ನಿಖರತೆ ಅತ್ಯಗತ್ಯವಾಗಿರುತ್ತದೆ. ಈಗಾಗಲೇ ಗ್ರೂಪ್-ಬಿ ಮತ್ತು ಗ್ರೂಪ್-ಎ ವೃಂದದ ಅಧಿಕಾರಿಗಳ ವಾರ್ಷಿಕ ಕಾರ್ಯನಿರ್ವಹಣಾ ವರದಿ ಹಾಗೂ ಆಸ್ತಿ ಮತ್ತು ಋಣಭಾರ ಪಟ್ಟಿಯನ್ನು SPARROW ಮೂಲಕ ನಿರ್ವಹಿಸಲು NIC ಇ ಮೇಲ್ ಐಡಿ ಗಳನ್ನು ಸೃಜಿಸಲಾಗಿದೆ. ಬಾಕಿ ಉಳಿದಿರುವ ಅಧಿಕಾರಿಗಳಿಗೆ NIC ಇ ಮೇಲ್ ಐಡಿ ಸೃಜಿಸಬೇಕಾಗಿದೆ.

ಮೇಲ್ಕಂಡ ಎಲ್ಲಾ ಪ್ರಕ್ರಿಯೆಗಳು ಅತ್ಯಂತ ತುರ್ತಾಗಿ ನಡೆಯಬೇಕಾಗಿರುವುದರಿಂದ ಪ್ರತಿ ಶೈಕ್ಷಣಿಕ ಜಿಲ್ಲೆಯಿಂದ ಈ ಕೆಳಕಂಡಂತೆ ಕಂಪ್ಯೂಟರ್ ಜ್ಞಾನ ಹೊಂದಿರುವ ಗ್ರೂಪ್-ಬಿ ವೃಂದದ ಇಬ್ಬರು ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಲು ಸೂಚಿಸಿದೆ.

1) ವಿಷಯ ಪರಿವೀಕ್ಷಕರು, ಉಪನಿರ್ದೇಶಕರ ಕಛೇರಿ
2) ಉಪನ್ಯಾಸಕರು, ಡಯಟ್

ಜಿಲ್ಲಾ ನೋಡಲು ಅಧಿಕಾರಿಗಳ ಹೆಸರು, ಪದನಾಮ, ಮೊಬೈಲ್ ಸಂಖ್ಯೆ ಮತ್ತು ಇ ಮೇಲ್ ಐಡಿಯನ್ನು ತಕ್ಷಣವೇ ಇ-ಆಡಳಿತ ವಿಭಾಗವನ್ನು **sadpiegov@gmail.com** ಗೆ ಕಳುಹಿಸಲು ಸೂಚಿಸಿದೆ. ಹಾಗೂ ಸದರಿ ಅಧಿಕಾರಿಗಳನ್ನು **ದಿನಾಂಕ:-04-01-2019** -ರಂದು **ಶುಕ್ರವಾರ ಬೆಳಗ್ಗೆ 10-00 ಗಂಟೆಗೆ ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.**, ಇಲ್ಲಿ ನಡೆಯುವ ನೋಡಲ್ ಅಧಿಕಾರಿಗಳ ಸಭೆಗೆ ಈ ಕಛೇರಿಯ ದಿನಾಂಕ:-11-12-2018ರ ಸುತ್ತೋಲೆಯನ್ವಯ ತಮ್ಮ ಜಿಲ್ಲಾ ವ್ಯಾಪ್ತಿಯ ಎಲ್ಲಾ ಅಧಿಕಾರಿಗಳ ಮಾಹಿತಿ ನಮೂನೆಗಳೊಂದಿಗೆ ಕಡ್ಡಾಯವಾಗಿ ಹಾಜರಾಗುವಂತೆ ಕ್ರಮ ಕೈಗೊಳ್ಳಲು ಸೂಚಿಸಿದೆ.

**(ಅರುಳ್ ಕುಮಾರ್)**
**ಜಂಟಿ ನಿರ್ದೇಶಕರು (ಆಡಳಿತ)**

ಪ್ರತಿಯನ್ನು:-

1. ಅಪರ ಆಯುಕ್ತರು, ಧಾರವಾಡ ಮತ್ತು ಗುಲ್ಬರ್ಗ, ಇವರಿಗೆ ಮಾಹಿತಿಗಾಗಿ
2. ಉಪನಿರ್ದೇಶಕರು (ಆಡಳಿತ), ಬೆಂಗಳೂರು/ಮೈಸೂರು/ಕಲ್ಬುರ್ಗಿ/ಬೆಳಗಾಂ ವಿಭಾಗದ ಎಲ್ಲಾ ಜಿಲ್ಲೆಗಳು, ಇವರಿಗೆ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ
3. ಉಪನಿರ್ದೇಶಕರು (ಅಭಿವೃದ್ಧಿ), ಬೆಂಗಳೂರು/ಮೈಸೂರು/ಕಲ್ಬುರ್ಗಿ/ಬೆಳಗಾಂ ವಿಭಾಗದ ಎಲ್ಲಾ ಜಿಲ್ಲೆಗಳು, ಇವರಿಗೆ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ
4. ಕಛೇರಿ ಪ್ರತಿ